**Akashvani : Bangalore**
**National Bulletin In Kannada**
**14.10.2024 / 13.10 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**14.10.2024 / 13.10 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಜಮ್ಮು-ಕಾಶ್ಮೀರದಲ್ಲಿ ರಾಷ್ಟ್ರಪತಿ ಆಡಳಿತ ವಾಪಸ್ ; ಹೊಸ ಸರ್ಕಾರ ರಚನೆಗೆ ಹಾದಿ ಸುಗಮ

೨. ೫-ಜಿ ತಂತ್ರಜ್ಞಾನದಿಂದ ದೇಶದ ಆರ್ಥಿಕತೆಗೆ ಅಪಾರ ಕೊಡುಗೆ ನಿರೀಕ್ಷೆ - ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ

೩. ಭಾರತದಿಂದ ವಿಶ್ವದರ್ಜೆ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಅಭಿವೃದ್ಧಿ - ಆರ್‌ಬಿಐ ಗವರ್ನರ್

೪. ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಇಂದು ಪಾಕಿಸ್ತಾನ-ನ್ಯೂಜಿಲೆಂಡ್ ನಡುವೆ ಹಣಾಹಣಿ

**<><*<><>*><>**

ಕೇಂದ್ರಾಡಳಿತ ಪ್ರದೇಶ ಜಮ್ಮು ಮತ್ತು ಕಾಶ್ಮೀರದಲ್ಲಿ ನ್ಯಾಷನಲ್ ಕಾನ್ಫರೆನ್ಸ್ ಉಪಾಧ್ಯಕ್ಷ ಓಮರ್‌ಅಬ್ದುಲ್ಲಾ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೂ ಮುನ್ನ ರಾಷ್ಟ್ರಪತಿ ಆಳ್ವಿಕೆಯನ್ನು ಕೇಂದ್ರ ಸರ್ಕಾರ ನಿನ್ನೆ ಹಿಂಪಡೆದಿದೆ. ಪ್ರಮಾಣ ವಚನ ಸ್ವೀಕಾರ ಸಮಾರಂಭ ಇಂದು ನಡೆಯುವ ಸಾಧ್ಯತೆಯಿದೆ. ಕೇಂದ್ರ ಗೃಹ ಸಚಿವಾಲಯ ಈ ಸಂಬಂಧ ಅಧಿಸೂಚನೆ ಹೊರಡಿಸಿದೆ. ಇದಕ್ಕೂ ಮೊದಲು ನ್ಯಾಷನಲ್ ಕಾನ್ಫರೆನ್ಸ್ ಉಪಾಧ್ಯಕ್ಷ ಓಮರ್‌ಅಬ್ದುಲ್ಲಾ ಅಕ್ಟೋಬರ್ ೧೧ರಂದು ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರನ್ನು ಶ್ರೀನಗರ ರಾಜಭವನದಲ್ಲಿ ಭೇಟಿಯಾಗಿ ಜಮ್ಮು ಮತ್ತು ಕಾಶ್ಮೀರದಲ್ಲಿ ಹೊಸ ಸರ್ಕಾರ ರಚನೆಗೆ ಹಕ್ಕು ಮಂಡಿಸಿದ್ದರು.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ಅಲ್ಜೀರಿಯಾದ ನಾಯಕರೊಂದಿಗೆ ಹಲವು ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಅಲ್ಲದೇ ಅಲ್ಜೀರಿಯಾ-ಭಾರತ ಆರ್ಥಿಕ ವೇದಿಕೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಆಫ್ರಿಕಾದ ಅಲ್ಜೀರಿಯಾ, ಮೌರಿಟಾನಿಯಾ ಹಾಗೂ ಮಲಾವಿ

ದೇಶಗಳ ತಮ್ಮ ಭೇಟಿಯ ಭಾಗವಾಗಿ ರಾಷ್ಟ್ರಪತಿಗಳು ಅಲ್ಜೀರಿಯಾದ ರಾಜಧಾನಿ ಅಲ್ಜೀರ್ಸ್‌ನಲ್ಲಿದ್ದಾರೆ. ಈ ಭೇಟಿಯು ಆಫ್ರಿಕಾ ದೇಶಗಳೊಂದಿಗೆ ಸೌಹಾರ್ದ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಭಾರತದ ಬದ್ಧತೆಯನ್ನು ಪುನರುಚ್ಚರಿಸುವುದರ ಮೇಲೆ ಕೇಂದ್ರೀಕೃತವಾಗಿದೆ.ಭೇಟಿಯ ಎರಡನೇ ಹಂತದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಇದೇ ೧೬ ರಂದು ಮೌರಿಟಾನಿಯಾಗೆ ಮತ್ತು ಅಂತಿಮ ಹಂತದಲ್ಲಿ, ಇದೇ ೧೭ ರಿಂದ ೧೯ ರವರೆಗೆ ಮಲಾವಿಗೆ ಭೇಟಿ ನೀಡಲಿದ್ದಾರೆ. ಈ ದೇಶಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ, ರಾಷ್ಟ್ರಪತಿಗಳು ಆ ದೇಶಗಳ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಪ್ರಮುಖ ವ್ಯಾಪಾರ ಮತ್ತು ಉದ್ಯಮದ ನಾಯಕರು ಮತ್ತು ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ.

<><*<><>*><>

ಭಾರತ, ಕೇವಲ ೨೨ ತಿಂಗಳಲ್ಲಿ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ೫-ಜಿ ಟೆಲಿಕಾಂ ಸೇವೆಗಳನ್ನು ಹೊರತಂದಿದ್ದು, ಶೇಕಡ ೮೦ ರಷ್ಟು ಜನಸಂಖ್ಯೆಯನ್ನು ತಲುಪಿದೆ ಎಂದು ಕೇಂದ್ರ ಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ೫ನೇ ಜಾಗತಿಕ ಮಾನದಂಡಗಳ ವಿಚಾರ ಸಂಕಿರಣದ ಉದ್ಘಾಟನಾ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಅವರು, ೫-ಜಿ ತಂತ್ರಜ್ಞಾನ ೨೦೪೦ ರ ವೇಳೆಗೆ ದೇಶದ ಆರ್ಥಿಕತೆಗೆ ೪೫೦ ಮಿಲಿಯನ್ ಅಮೆರಿಕಾ ಡಾಲರ್‌ಗಳಷ್ಟು ಕೊಡುಗೆ ನೀಡುವ ನಿರೀಕ್ಷೆಯಿದೆ. ಹೊಸ ತಂತ್ರಜ್ಞಾನಗಳನ್ನು ಜಾಗತಿಕವಾಗಿ ಪರಿಚಯಿಸುವ ಮಾನದಂಡಗಳ ಕುರಿತು ಒಮ್ಮತ ರೂಪಿಸುವ ಚರ್ಚೆಗೆ ಈ ವಿಚಾರ ಸಂಕಿರಣ ವೇದಿಕೆಯಾಗಿದೆ ಎಂದರು. ಮೊದಲ ಬಾರಿಗೆ ಭಾರತದಲ್ಲಿ ವಿಶ್ವ ದೂರಸಂಪರ್ಕ ಪ್ರಮಾಣೀಕರಣ ಅಸೆಂಬ್ಲಿ- ಡಬ್ಲ್ಯುಟಿಎಸ್‌ಎ ಆಯೋಜಿಸಲಾಗುತ್ತಿದ್ದು, ಈ ಸಮಾವೇಶದಲ್ಲಿ ಪಾಲ್ಗೊಳ್ಳಲು ನೂರಕ್ಕೂ ಹೆಚ್ಚು ದೇಶಗಳ ನಾಯಕರು ನವದೆಹಲಿಗೆ ಆಗಮಿಸಿದ್ದಾರೆ. ಇಂದು ದೇಶವು ಕೃತಕ ಬುದ್ಧಿಮತ್ತೆ, ಬ್ಲಾಕ್‌ಚೈನ್, ಸ್ಮಾರ್ಟ್ ಸಿಟಿಗಳು ಮತ್ತು ತಂತ್ರಜ್ಞಾನಗಳ ಭವಿಷ್ಯ ರೂಪಿಸುತ್ತಿದೆ ಎಂದು ಸಿಂಧಿಯಾ ಹೇಳಿದರು.

<><*<><>*><>

ಹರಿಯಾಣದ ಬಿಜೆಪಿ ಶಾಸಕಾಂಗ ಸಭೆಯಲ್ಲಿ ತನ್ನ ನಾಯಕನನ್ನು ಆಯ್ಕೆ ಮಾಡುವ ಸಭೆಯ ಕೇಂದ್ರ ವೀಕ್ಷಕರನ್ನಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಅವರನ್ನು ಬಿಜೆಪಿ ನೇಮಿಸಿದೆ. ಅಲ್ಲದೇ ಜಮ್ಮು-ಕಾಶ್ಮೀರದ ಬಿಜೆಪಿ ಶಾಸಕಾಂಗ ಸಭೆಯಲ್ಲಿ ನಾಯಕನ ಆಯ್ಕೆ ಸಭೆಗೆ ಕೇಂದ್ರ ವೀಕ್ಷಕರಾಗಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹಾಗೂ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್ ಅವರನ್ನು ನೇಮಿಸಿದೆ.

<><*<><>*><>

ಅಂತರ ಸಂಸದೀಯ ಸಂಘಟನೆಯ ೧೪೯ನೇ ಸಭೆಯಲ್ಲಿ ಪಾಲ್ಗೊಳ್ಳಲು ಲೋಕಸಭಾ ಸ್ಪೀಕರ್ ಓಂಬಿರ್ಲಾ ನೇತೃತ್ವದ ಭಾರತದ ಸಂಸದೀಯ ನಿಯೋಗ ಕಳೆದ ರಾತ್ರಿ ಜಿನೇವಾ ತಲುಪಿದೆ. ಶಾಂತಿ ಹಾಗೂ ಸುಸ್ಥಿರ ಭವಿಷ್ಯಕ್ಕಾಗಿ ವಿಜ್ಞಾನ, ತಂತ್ರಜ್ಞಾನ ಹಾಗೂ ಆವಿಷ್ಕಾರಗಳ ಸಹಯೋಗ ಕುರಿತಂತೆ ಲೋಕಸಭಾಧ್ಯಕ್ಷ ಓಂಬಿರ್ಲಾ ಐದು ದಿನಗಳ ಕಾಲ ನಡೆಯಲಿರುವ ಅಧಿವೇಶನನದಲ್ಲಿ ಭಾಷಣ ಮಾಡಲಿದ್ದಾರೆ. ಇದಲ್ಲದೆ ಅವರು, ಅಂತರ ಸಂಸದೀಯ ಸಂಘಟನೆಯ ಆಡಳಿತ ಮಂಡಳಿ ಸಭೆಯಲ್ಲಿಯೂ ಪಾಲ್ಗೊಳ್ಳಲಿದ್ದಾರೆ. ಇಂದು ಭಾರತೀಯ ಸಮುದಾಯವರನ್ನು ಭೇಟಿ ಮಾಡಲಿದ್ದಾರೆ. ರಾಜ್ಯಸಭೆಯ ಉಪ ಸಭಾಪತಿ ಹರಿವಂಶ್ ಸಿಂಗ್ ಕೂಡ ನಿಯೋಗದಲ್ಲಿದ್ದಾರೆ. ಅಂತರ ಸಂಸದೀಯ ಸಂಘಟನೆ ಒಟ್ಟು ೧೮೦ ಸಂಸತ್ ಸದಸ್ಯರನ್ನು ಹಾಗೂ ೧೫ ಸಹ ಸದಸ್ಯರನ್ನು ಹೊಂದಿದೆ. ಚೀನಾ, ಭಾರತ, ಇಂಡೋನೇಷಿಯಾಗಳಂತಹ ದೊಡ್ಡ ದೇಶಗಳಲ್ಲದೇ ಕಾಬೊ, ವರ್ಡೆ, ಸ್ಯಾನ್ ಮ್ಯಾರಿನೊ ಮತ್ತು ಪಲವುಗಳಂತಹ ಪುಟ್ಟ ದೇಶಗಳ ಸಂಸದರನ್ನೊಳಗೊಂಡಿದೆ.

<><*<><>*><>

ಭಾರತ ವಿಶ್ವದರ್ಜೆಯ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಅಭಿವೃದ್ಧಿಪಡಿಸಿದ್ದು, ಇದರಿಂದ ಗುಣಮಟ್ಟದ ಡಿಜಿಟಲ್ ಹಣಕಾಸು ಉತ್ಪನ್ನಗಳ ಅಭಿವೃದ್ಧಿಗೆ ಅನುಕೂಲ ಮಾಡಿಕೊಟ್ಟಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ಗವರ್ನರ್ ಶಕ್ತಿಕಾಂತ್ ದಾಸ್ ಹೇಳಿದ್ದಾರೆ. ದೇಶ ಈಗ ವಿಶ್ವದ ಮೂರನೇ ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಯ ನೆಲೆಯಾಗಿದ್ದು, ಒಂದು ಲಕ್ಷದ ೪೦ ಸಾವಿರಕ್ಕೂ ಹೆಚ್ಚು ನವೋದ್ಯಮಗಳು ಹಾಗೂ ೧೦೦ಕ್ಕೂ ಹೆಚ್ಚು ಯೂನಿಕಾರ್ನ್‌ಗಳನ್ನು ಹೊಂದಿದೆ ಎಂದರು. ನವದೆಹಲಿಯಲ್ಲಿಂದು ಆರ್‌ಬಿಐ@೯೦ ಉನ್ನತಮಟ್ಟದ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಶಕ್ತಿಕಾಂತ್ ದಾಸ್, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ವಲಯದಲ್ಲಿ ಭಾರತದ ಅನುಭವಗಳನ್ನು ಇತರ ದೇಶಗಳಲ್ಲಿ ಸುಧಾರಣೆ ಕೈಗೊಳ್ಳಲು ಹಾಗೂ ಜಾಗತಿಕ ಡಿಜಿಟಲ್ ಕ್ರಾಂತಿಗೆ ನಾಂದಿ ಆಡಬಹುದು ಎಂದು ಒತ್ತಿ ಹೇಳಿದರು.

ಡಿಜಿಟಲ್ ಕರೆನ್ಸಿಗಳ ಬಳಕೆ ಕುರಿತು ಮಾತನಾಡಿದ ಅವರು, ಕೇಂದ್ರೀಯ ಬ್ಯಾಂಕ್ ಡಿಜಿಟಲ್ ಕರೆನ್ಸಿಗಳ ಗಡಿಯಾಚೆಗಿನ ಪಾವತಿಗಳನ್ನು ಸುಗಮಗೊಳಿಸುವ ಸಾಮರ್ಥ್ಯ ಹೊಂದಿದೆ. ಸಗಟು ಹಾಗೂ ಚಿಲ್ಲರೆ ಡಿಜಿಟಲ್ ಕರೆನ್ಸಿಗಳನ್ನು ಪ್ರಾರಂಭಿಸಿದ ಜಗತ್ತಿನ ಕೆಲವೇ ದೇಶಗಳಲ್ಲಿ ಭಾರತವು ಒಂದು ಎಂದು ಹೇಳಿದರು.

<><*<><>*><>

ಜಮ್ಮು-ಕಾಶ್ಮೀರದಲ್ಲಿರುವ ದೇವಾಲಯಗಳ ಭೂಮಿಯನ್ನು ಗುರುತಿಸಲು ಹಾಗೂ ಭೂಮಿ ಅತಿಕ್ರಮಣ ತೆರವುಗೊಳಿಸುವುದನ್ನು ಖಚಿತಪಡಿಸುವಂತೆ ವಿಭಾಗೀಯ ಆಯುಕ್ತರು ಹಾಗೂ ಎಲ್ಲ ೨೦ ಜಿಲ್ಲಾಧಿಕಾರಿಗಳಿಗೆ ಕೇಂದ್ರಾಡಳಿತ ಪ್ರದೇಶ ಸರ್ಕಾರ ಸೂಚನೆ ನೀಡಿದೆ. ಎಲ್ಲ ಐತಿಹಾಸಿಕ

ದೇವಾಲಯಗಳ ಭೂಮಿಯ ವಿವರವಾದ ಸ್ಥಿತಿ-ಗತಿಗಳನ್ನು ಸಂಗ್ರಹಿಸಿ ಸಂಸ್ಕೃತಿಯ ಇಲಾಖೆಯ ಜಾಲತಾಣದಲ್ಲಿ ಅಳವಡಿಸಬೇಕೆಂದು ತಿಳಿಸಲಾಗಿದೆ. ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ ಹೈಕೋರ್ಟ್ ನೀಡಿದ ಆದೇಶದ ಹಿನ್ನೆಲೆಯಲ್ಲಿ ಕೇಂದ್ರಾಡಳಿತ ಪ್ರದೇಶದ ದೇವಾಲಯಗಳ ಜೀರ್ಣೋದ್ಧಾರ ಕುರಿತು ಇತ್ತೀಚೆಗೆ ಮುಖ್ಯ ಕಾರ್ಯದರ್ಶಿಗಳು ಚರ್ಚೆ ನಡೆಸಿದ್ದರು. ಹೈಕೋರ್ಟ್ ಆದೇಶದ ನಂತರ ಅರ್ಜಿದಾರರು ಮುಖ್ಯ ಕಾರ್ಯದರ್ಶಿಗೆ ಮನವಿ ಸಲ್ಲಿಸಿ ದೇಗುಲಗಳ ಜೀರ್ಣೋದ್ಧಾರ ಹಾಗೂ ದೇಗುಲಗಳ ಭೂಮಿಯನ್ನು ಗುರುತಿಸಲು ಸಮಿತಿಯೊಂದನ್ನು ರಚಿಸುವಂತೆ ಕೋರಿ ಮನವಿ ಸಲ್ಲಿಸಿದ್ದರು. ದೇಗುಲಗಳು ಹಾಗೂ ಅವುಗಳ ಭೂಮಿಯ ಸ್ಥಿತಿ-ಗತಿ ಕುರಿತಂತೆ ಅಂಕಿ-ಅಂಶ ಸಂಗ್ರಹಕ್ಕೆ ಎಲ್ಲ ಜಿಲ್ಲಾಧಿಕಾರಿಗಳು ಹಾಗೂ ವಿಭಾಗೀಯ ಆಯುಕ್ತರು, ಸಂಸ್ಕೃತಿ ಇಲಾಖೆಯೊಂದಿಗೆ ಸಮನ್ವಯ ಸಾಧಿಸುವಂತೆ ಮುಖ್ಯ ಕಾರ್ಯದರ್ಶಿ ಸೂಚಿಸಿದ್ದು, ದತ್ತಾಂಶ ಸಂಗ್ರಹ ನಂತರ ಮಾಹಿತಿಯನ್ನು ಸಂಸ್ಕೃತಿ ಇಲಾಖೆಯ ಜಾಲತಾಣದಲ್ಲಿ ಅಳವಡಿಸುವಂತೆ ಆದೇಶಿಸಿದ್ದಾರೆ.

<><*<><>*><>

ಪ್ರಸಿದ್ಧ ಬಾಲಿವುಡ್ ಚಲನಚಿತ್ರ ನಿರ್ಮಾಪಕ, ನಿರ್ದೇಶಕ ಹಾಗೂ ಚಿತ್ರಕತೆಗಾರ ರಾಜಕುಮಾರ್ ಇರಾನಿ ಅವರಿಗೆ ನಿನ್ನೆ ಮಧ್ಯಪ್ರದೇಶದ ಖಂಡ್ವಾದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರೀಯ ಕಿಶೋರ್‌ಕುಮಾರ್ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಹಿನ್ನೆಲೆಗಾಯಕ ಹಾಗೂ ನಟ ಕಿಶೋರ್‌ಕುಮಾರ್ ಅವರ ೩೭ನೇ ಪುಣ್ಯತಿಥಿಯ ಅಂಗವಾಗಿ ಆಯೋಜಿಸಲಾಗಿದ್ದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಖಂಡ್ವಾ ಕಿಶೋರ್‌ಕುಮಾರ್ ಅವರ ಜನ್ಮಸ್ಥಳವಾಗಿದ್ದು, ಮಧ್ಯಪ್ರದೇಶ ಸರ್ಕಾರದ ಸಂಪುಟ ಸಚಿವ ಕುನ್ವರ್ ವಿಜಯ್ ಶಾ, ರಾಷ್ಟ್ರೀಯ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ೧೯೯೭ ರಿಂದ ಮಧ್ಯಪ್ರದೇಶ ಸರ್ಕಾರದ ಸಂಸ್ಕೃತಿ ನಿರ್ದೇಶನಾಲಯ ಪ್ರತಿವರ್ಷ ಶ್ರೇಷ್ಠ ಕಲಾವಿದರಿಗೆ ಈ ಪ್ರಶಸ್ತಿ ನೀಡಿಕೊಂಡು ಬರುತ್ತಿದೆ. ಈವರೆಗೆ ಹಲವು ಪ್ರಸಿದ್ಧ ಬಾಲಿವುಡ್ ನಟರು, ನಿರ್ಮಾಪಕರು, ನಿರ್ದೇಶಕರು ಪ್ರಶಸ್ತಿ ಪಡೆದುಕೊಂಡಿದ್ದಾರೆ. ಪ್ರಶಸ್ತಿ ಪ್ರದಾನ ಸಮಾರಂಭಕ್ಕೂ ಮುನ್ನ ಇರಾನಿ ಅವರು, ಕಿಶೋರ್‌ಕುಮಾರ್ ಅವರ ಸಮಾಧಿ ಸ್ಥಳಕ್ಕೆ ತೆರಳಿ ಪುಷ್ಪ ನಮನ ಸಲ್ಲಿಸಿದರು.

<><*<><>*><>

ಮುಂಬೈನಿಂದ ನ್ಯೂಯಾರ್ಕ್‌ಗೆ ತೆರಳುತ್ತಿದ್ದ ಏರ್ ಇಂಡಿಯಾ ವಿಮಾನವನ್ನು ಬಾಂಬ್ ಬೆದರಿಕೆ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ದೆಹಲಿಯ ಕಡೆ ತಿರುಗಿಸಲಾಗಿದೆ. ವಿಮಾನದಲ್ಲಿದ್ದ ಎಲ್ಲ ಪ್ರಯಾಣಿಕರು ಸುರಕ್ಷಿತವಾಗಿದ್ದು, ಈವರೆಗೆ ನಡೆಸಿರುವ ತಪಾಸಣೆಯಲ್ಲಿ ಯಾವುದೇ ಶಂಕಿತ ವಸ್ತುಗಳು ಪತ್ತೆಯಾಗಿಲ್ಲ. ಮುಂಬೈನಿಂದ ಮಸ್ಕಟ್‌ಗೆ ತೆರಳುತ್ತಿದ್ದ ಇಂಡಿಗೋ ವಿಮಾನಕ್ಕೂ ಇದೇ ರೀತಿಯ ಬಾಂಬ್ ಬೆದರಿಕೆ ಬಂದಿದೆ. ಶಿಷ್ಟಾಚಾರದಂತೆ ವಿಮಾನವನ್ನು ಪ್ರತ್ಯೇಕ ನಿಲ್ದಾಣಕ್ಕೆ

ಕೊಂಡೊಯ್ಯಲಾಗಿದ್ದು, ಕಡ್ಡಾಯ ಭದ್ರತಾ ತಪಾಸಣೆಯನ್ನು ತಕ್ಷಣವೇ ಪ್ರಾರಂಭಿಸಲಾಯಿತು. ಮುಂಬೈನಿಂದ ಜೆಡ್ಡಾಗೆ ತೆರಳುತ್ತಿದ್ದ ಇಂಡಿಗೋ ವಿಮಾನಕ್ಕೂ ಬಾಂಬ್ ಬೆದರಿಕೆ ಬಂದಿದೆ. ಈ ನಡುವೆ ಮುಂಬೈ-ಹೌರಾ ಮೇಲ್ ರೈಲನ್ನು ಟೈಮರ್ ಬಾಂಬ್‌ನಿಂದ ಸ್ಫೋಟಿಸುವ ಬೆದರಿಕೆ ಬಂದಿದ್ದು, ಜಲ್‌ಗಾಂ ನಿಲ್ದಾಣದಲ್ಲಿ ರೈಲನ್ನು ನಿಲ್ಲಿಸಿ ಪರಿಶೀಲಿಸಿದಾಗ ಯಾವುದೇ ಅನುಮಾನಾಸ್ಪದ ವಸ್ತುಗಳು ಪತ್ತೆಯಾಗಿಲ್ಲ. ನಂತರ ರೈಲು ಹೌರಾ ಕಡೆ ಚಲಿಸಿದೆ.

<><*<><>*><>

ಕೇರಳದ ಕೊಚ್ಚಿ ನಗರ ಪೊಲೀಸರು ತಮಿಳು ಹಾಗೂ ಮಲೆಯಾಳಂ ಚಿತ್ರನಟ ಬಾಲಾ ಅವರನ್ನು ಇಂದು ಬೆಳಗ್ಗೆ ಅವರ ನಿವಾಸದಲ್ಲಿ ಬಂಧಿಸಿದ್ದಾರೆ. ಮಾಜಿ ಪತ್ನಿ ಗಾಯಕಿ ಅಮೃತ ಸುರೇಶ್ ನೀಡಿದ ದೂರಿನ ಹಿನ್ನೆಲೆಯಲ್ಲಿ ಪೊಲೀಸರು ನಟನನ್ನು ಬಂಧಿಸಿದ್ದಾರೆ. ಸಾಮಾಜಿಕ ಮಾಧ್ಯಮದ ಮೂಲಕ ತಮ್ಮನ್ನು ಅವಮಾನಿಸಿದ್ದು, ಅವರ ಪೋಸ್ಟ್‌ಗಳು ತಮ್ಮ ೧೨ ವರ್ಷದ ಮಗಳಿಗೆ ಭಾವನಾತ್ಮಕ ನೋವುಂಟು ಮಾಡಿದೆ ಎಂದು ಪತ್ನಿ ಪೊಲೀಸರಿಗೆ ನೀಡಿರುವ ದೂರಿನಲ್ಲಿ ಹೇಳಿದ್ದಾರೆ. ಪೊಲೀಸರು ನಟ ಬಾಲಾ ವಿರುದ್ಧ ಬಾಲನ್ಯಾಯ ಕಾಯ್ದೆಯಡಿ ಮತ್ತೊಂದು ಪ್ರಕರಣವನ್ನು ದಾಖಲಿಸಿದ್ದಾರೆ. ಅವರನ್ನು ಸದ್ಯದಲ್ಲೇ ನ್ಯಾಯಾಲಯದ ಮುಂದೆ ಹಾಜರು ಪಡಿಸಲಿದ್ದಾರೆ.

<><*<><>*><>

ಶಾರ್ಜಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ಕೊನೆಯ ಗುಂಪು ಹಂತದ ಪಂದ್ಯದಲ್ಲಿ ಇಂದು ಪಾಕಿಸ್ತಾನ ಮತ್ತು ನ್ಯೂಜಿಲೆಂಡ್ ಮುಖಾಮುಖಿಯಾಗಲಿದೆ. ಪಂದ್ಯ ಇಂದು ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><*<><>*><>

ಇಂದು ಕಜಕಿಸ್ಥಾನದ ಅಲ್ಮಾಟಿಯಲ್ಲಿ ನಡೆಯಲಿರುವ 'ಅಲ್ಮಾಟಿ ಓಪನ್ ಟೆನಿಸ್, ಪುರುಷರ ಡಬಲ್ಸ್ ಪ್ರೀ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಟೆನಿಸ್ ಆಟಗಾರರಾದ, ಯೂಕಿ ಭಾಂಬ್ರಿ, ರಿತ್ವಿಕ್ ಚೌಧರಿ ಮತ್ತು ಅರ್ಜುನ್ ಖಡೆ ಆಡಲಿದ್ದಾರೆ. ಶ್ರೇಯಾಂಕ ರಹಿತ ಆಟಗಾರರಾದ ರಿತ್ವಿಕ್ ಮತ್ತು ಅರ್ಜುನ್ ಫಿನ್‌ಲ್ಯಾಂಡ್‌ನ ಪ್ಯಾಟ್ರಿಕ್ ನಿಕ್ಲಾಸ್ ಮತ್ತು ಇಟಲಿಯ ಮಾರ್ಕೋ ಬಾರ್ಟೊಲೊಟ್ಟಿ ವಿರುದ್ಧ ಸೆಣಸಲಿದ್ದು, ಮೂರನೇ ಶ್ರೇಯಾಂಕಿತ ಯೂಕಿ ಭಾಂಬ್ರಿ ಮತ್ತು ಫ್ರೆಂಚ್ ಸಹವರ್ತಿ ಆಲ್ಬೆನೋ ಓಲಿವೆಟ್ಟಿ, ಜರ್ಮನಿಯ ಜಾಕೊಬ್ ಮತ್ತು ವಾಲ್ನೆಕ್ ವಿರುದ್ಧ ಕಣಕ್ಕಿಳಿಯಲಿದ್ದಾರೆ. ಮತ್ತೊಬ್ಬ ಭಾರತೀಯ ಆಟಗಾರ ಎನ್. ಶ್ರೀರಾಮ್ ಬಾಲಾಜಿ, ಅರ್ಜೆಂಟಿನಾದ ಆಟಗಾರ ಗ್ಯೂಡೊ ಆಂಡ್ರೋಜ್ಜಿ ಅವರೊಂದಿಗೆ ಆಸ್ಟ್ರೇಲಿಯಾದ ಅಲೆಕ್ಸಾಂಡ್ರಾ ವೂಕಿಕ್ ಮತ್ತು ಜೇಮ್ಸ್ ಡಕ್‌ವರ್ಥ್ ಜೋಡಿ ವಿರುದ್ಧ ಸೆಣಸಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೨೦ ಕ್ಕೆ <>*><>**